# All India Radio: Bangalore
# National Bulletin In Kannada
# 30.08.2026 19.35 hrs
# ಆಕಾಶವಾಣಿ, ಬೆಂಗಳೂರು
# ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

೧. ಪ್ರಧಾನಮಂತ್ರಿ ನರೇಂದ್ರ ಮೋದಿ ಅವರಿಗೆ ಉಜ್ಬೇಕಿಸ್ತಾನದ ಅತ್ಯುನ್ನತ ಗೌರವ ಪ್ರದಾನ

೨. ಹೆಣ್ಣು ಮಕ್ಕಳ ಅಭ್ಯುದಯಕ್ಕೆ ಕೇಂದ್ರ ಸರ್ಕಾರದಿಂದ ಹಲವು ಕ್ರಮ - ಮನ್ ಕಿ ಬಾತ್‌ನಲ್ಲಿ ಪ್ರಧಾನಿ ವಿವರಣೆ

೩. ಕರ್ನಾಟಕ ಸರ್ಕಾರದ ಮಹತ್ವಾಕಾಂಕ್ಷಿ ಗೃಹ ಲಕ್ಷ್ಮೀ ಯೋಜನೆಗೆ ಇಂದು ಮೂರು ವರ್ಷ; ಮಹಿಳೆಯರಿಗೆ ಆಶಾಕಿರಣ

೪. ದುಬೈನಲ್ಲಿಂದು ಟಿ-೨೦ ಏಷ್ಯಾ ಕಪ್ ಕ್ರಿಕೆಟ್ ಪಂದ್ಯ, ಭಾರತ ಮತ್ತು ಥಾಯ್ಲೆಂಡ್ ವನಿತೆಯರ ತಂಡ ಮುಖಾಮುಖಿ

---

ಉಜ್ಬೇಕಿಸ್ತಾನ ಪ್ರವಾಸದಲ್ಲಿರುವ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರಿಗೆ ಅಲ್ಲಿನ ಅಧ್ಯಕ್ಷ ಶಾವ್ಕತ್ ಮಿರ್ಜಿಯೊಯೊವ್ ತಾಷ್ಕೆಂಟ್‌ನಲ್ಲಿಂದು ಆ ದೇಶದ ಅತ್ಯುನ್ನತ ಗೌರವವಾದ ಆರ್ಡರ್ ಆಫ್ ಒಲಿ ದರಾಜಲಿ ದೋಸ್ಲಿಕ್ ಪ್ರದಾನ ಮಾಡಿದ್ದಾರೆ.

ಈ ಗೌರವವನ್ನು ಭಾರತ ಮತ್ತು ಉಜ್ಬೇಕಿಸ್ತಾನ ನಡುವಿನ ಶಾಶ್ವತ ಸ್ನೇಹ ಬಾಂಧವ್ಯಕ್ಕೆ ಸಮರ್ಪಿಸುವುದಾಗಿ ಪ್ರಧಾನಮಂತ್ರಿ ಹೇಳಿದ್ದಾರೆ.

ಉಜ್ಬೇಕಿಸ್ತಾನದ ಅತ್ಯುನ್ನತ ಗೌರವಕ್ಕೆ ಭಾಜನರಾಗಿರುವ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರನ್ನು ಕೇಂದ್ರ ಸಚಿವರು ಅಭಿನಂದಿಸಿದ್ದಾರೆ.

ಈ ಪ್ರತಿಷ್ಠಿತ ಗೌರವವು ಪ್ರಧಾನಮಂತ್ರಿಯವರ ದೂರದೃಷ್ಟಿಯ ನಾಯಕತ್ವ ಹಾಗೂ ಉಭಯ ದೇಶಗಳ ನಡುವಿನ ಶಾಶ್ವತ ಸ್ನೇಹವನ್ನು ಮತ್ತಷ್ಟು ಗಟ್ಟಿಗೊಳಿಸಲು ಅವರ ನಿರಂತರ ಪ್ರಯತ್ನಗಳಿಗೆ ಸಾಕ್ಷಿಯಾಗಿದೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಸಾಮಾಜಿಕ ಮಾಧ್ಯಮದಲ್ಲಿ ಹೇಳಿದ್ದಾರೆ.

ಜಾಗತಿಕ ದಕ್ಷಿಣದ ಧ್ವನಿಯನ್ನು ಬಲಪಡಿಸುವ ಪ್ರಧಾನಮಂತ್ರಿ ಮೋದಿಯವರ ರಾಜತಾಂತ್ರಿಕತೆಯ ನೀತಿಯು ಹೊಸ ಸಾಧ್ಯತೆಗಳತ್ತ ಸಾಗುತ್ತಿದ್ದು, ಇದು ಹೆಮ್ಮೆಯ ಕ್ಷಣ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಹೇಳಿದ್ದಾರೆ.

ಉಭಯ ದೇಶಗಳ ಮೈತ್ರಿಯನ್ನು ಮತ್ತಷ್ಟು ಗಟ್ಟಿಗೊಳಿಸಲು ಪ್ರಧಾನಮಂತ್ರಿಯವರ ನಿರಂತರ ಪ್ರಯತ್ನಗಳಿಗೆ ಈ ಪ್ರಶಸ್ತಿ ಮಾನ್ಯತೆಯಾಗಿದೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವ ಡಾ. ಎಸ್. ಜೈಶಂಕರ್ ಹೇಳಿದ್ದಾರೆ.

ಇದು ಭಾರತದ ಹೆಚ್ಚುತ್ತಿರುವ ಜಾಗತಿಕ ಸ್ಥಾನಮಾನವನ್ನು ತೋರಿಸಿದೆ ಎಂದು ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ತಿಳಿಸಿದ್ದಾರೆ.

ಪ್ರಧಾನಮಂತ್ರಿ ಮೋದಿಯವರಿಗೆ ದೊರೆತಿರುವ ೩೦ನೇ ಜಾಗತಿಕ ಗೌರವ ಇದಾಗಿದ್ದು, ಅವರ ನಾಯಕತ್ವ, ಜಾಗತಿಕ ಶಾಂತಿಯ ಬದ್ಧತೆ ಹಾಗೂ ಅಭಿವೃದ್ಧಿಯ ದೃಷ್ಟಿಕೋನಕ್ಕೆ ವಿಶ್ವದ ಮನ್ನಣೆಯಾಗಿದೆ ಎಂದು ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಜಗತ್ ಪ್ರಕಾಶ್ ನಡ್ಡಾ ಸಂತಸ ವ್ಯಕ್ತಪಡಿಸಿದ್ದಾರೆ.

---

ಭಾರತ ಮತ್ತು ಉಜ್ಬೇಕಿಸ್ತಾನ ಬಾಂಧವ್ಯ ಸಮಗ್ರ ಕಾರ್ಯತಂತ್ರದ ಪಾಲುದಾರಿಕೆ ಮಟ್ಟಕ್ಕೆ ಉನ್ನತೀಕರಣಗೊಳ್ಳುತ್ತಿದೆ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಹೇಳಿದ್ದಾರೆ.

ಉಭಯ ದೇಶಗಳು ಯುರೇನಿಯಂ ಪೂರೈಕೆಗಾಗಿ ದೀರ್ಘಾವಧಿಯ ಒಪ್ಪಂದವನ್ನೂ ಮಾಡಿಕೊಂಡಿವೆ ಎಂದು ಅವರು ತಿಳಿಸಿದ್ದಾರೆ.

ದ್ವಿಪಕ್ಷೀಯ ಸಹಕಾರದ ಎಲ್ಲ ಅಂಶಗಳಿಗೆ ನಿಕಟ ಸಮನ್ವಯದ ಮೂಲಕ ಮಾರ್ಗದರ್ಶನ ನೀಡಲು ವಿದೇಶಾಂಗ ಸಚಿವರ ಮಟ್ಟದಲ್ಲಿ ಸಮನ್ವಯ ಮಂಡಳಿಯನ್ನು ಸ್ಥಾಪಿಸಲಾಗುವುದು ಎಂದು ಪ್ರಧಾನಮಂತ್ರಿ ಹೇಳಿದ್ದಾರೆ.

ಸೆಪ್ಟೆಂಬರ್ ೧ರಂದು ಉಜ್ಬೇಕಿಸ್ತಾನದ ಸ್ವಾತಂತ್ರ್ಯ ದಿನಾಚರಣೆಯ ಅಂಗವಾಗಿ ಅಲ್ಲಿನ ಜನತೆಗೆ ಪ್ರಧಾನಮಂತ್ರಿ ಶುಭಾಶಯ ಕೋರಿದ್ದಾರೆ.

ಆರೋಗ್ಯಕರ ಮತ್ತು ಉಜ್ವಲ ಭವಿಷ್ಯದ ಸಂಕಲ್ಪದ ಸಾಕಾರಕ್ಕೆ ದೇಶಾದ್ಯಂತದ ಜನರು, ವಿಶೇಷವಾಗಿ ಯುವಜನರು ಹೆಚ್ಚಿನ ಸಂಖ್ಯೆಯಲ್ಲಿ ವಿಕಸಿತ ಭಾರತಕ್ಕಾಗಿ ಮಾದಕ ದ್ರವ್ಯ ಮುಕ್ತ ಭಾರತ ಅಭಿಯಾನದಲ್ಲಿ ಪಾಲ್ಗೊಂಡಿದ್ದಾರೆ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಹರ್ಷ ವ್ಯಕ್ತಪಡಿಸಿದ್ದಾರೆ.

ಆಕಾಶವಾಣಿಯ ಮಾಸಿಕ 'ಮನ್ ಕಿ ಬಾತ್' ಕಾರ್ಯಕ್ರಮದಲ್ಲಿ ಅವರು, ಮಾದಕ ವ್ಯಸನವು ಕೇವಲ ಆ ವ್ಯಕ್ತಿಯನ್ನು ಮಾತ್ರ ಬಾಧಿಸುವುದಿಲ್ಲ, ಅದರ ಪರಿಣಾಮ ಇಡೀ ಕುಟುಂಬ ಮತ್ತು ಸಮಾಜದ ಮೇಲಾಗುತ್ತದೆ. ಹೀಗಾಗಿ ಮನಮುಟ್ಟುವ ಘೋಷಣೆ, ಸೃಜನಶೀಲ ಹಾಡುಗಳ ಮೂಲಕ ಮಾದಕ ವಸ್ತುಗಳ ದುಷ್ಪರಿಣಾಮದ ಬಗ್ಗೆ ಯುವಜನರು ಜಾಗೃತಿ ಮೂಡಿಸುವಂತೆ ಕರೆ ನೀಡಿದರು.

ಮಹಿಳೆಯರ ಸ್ವಾವಲಂಬನೆಯ ಅಗತ್ಯದ ಬಗ್ಗೆ ಒತ್ತಿ ಹೇಳಿರುವ ಪ್ರಧಾನಮಂತ್ರಿ, 'ಪಿಎಂ ಸ್ವನಿಧಿ ಯೋಜನೆ'ಯ ಮೂಲಕ ಲಕ್ಷಾಂತರ ಮಹಿಳೆಯರು ಹೊಸ ಬಲವನ್ನು ಪಡೆದಿದ್ದು, ಈ ಯೋಜನೆಯ ನೆರವಿನೊಂದಿಗೆ ತಮ್ಮ ವ್ಯಾಪಾರವನ್ನು ವಿಸ್ತರಿಸಿಕೊಳ್ಳುತ್ತಿದ್ದಾರೆ ಎಂದರು. ಇದಕ್ಕೆ ನಿದರ್ಶನವಾಗಿ ಬೆಂಗಳೂರಿನ ನಿಂಗಮ್ಮ ಮತ್ತು ಗಾಜಿಯಾಬಾದ್‌ನ ಬಬಿತಾ ಶರ್ಮಾ ಅವರ ಯಶೋಗಾಥೆಯನ್ನು ನೀಡಿದರು.

ಸುಮಾರು ಶೇಕಡ ೪೬ ರಷ್ಟು ಮಹಿಳೆಯರು 'ಪಿಎಂ ಸ್ವನಿಧಿ ಯೋಜನೆ'ಯ ಫಲಾನುಭವಿಗಳಾಗಿದ್ದು, ಈ ಯೋಜನೆಯ ನೆರವು ಪಡೆದ ೩೫ ಲಕ್ಷ ಮಹಿಳೆಯರು ಆತ್ಮವಿಶ್ವಾಸದಿಂದ ತಮ್ಮ ಉದ್ಯಮದ ಜೊತೆಗೆ ಕುಟುಂಬವನ್ನೂ ಮುನ್ನಡೆಸುತ್ತಿದ್ದಾರೆ ಎಂದು ಅವರು ತಿಳಿಸಿದರು.

ಬಾಹ್ಯಾಕಾಶ ಯಾನದ ಹೆಣ್ಣು ಮಕ್ಕಳ ಕನಸಿಗೆ ರೆಕ್ಕೆ ನೀಡಲು 'ಮಿಷನ್ ಶಕ್ತಿಸ್ಯಾಟ್' ಉಪಕ್ರಮ ಆರಂಭಿಸಲಾಗಿದೆ. ಇದರ ಮೂಲಕ ೧೦೮ ದೇಶಗಳ ೧೨ ಸಾವಿರ ವಿದ್ಯಾರ್ಥಿನಿಯರಿಗೆ ನಾವೀನ್ಯತೆ ಕ್ಷೇತ್ರದಲ್ಲಿ ಉಪಗ್ರಹ ತಂತ್ರಜ್ಞಾನವನ್ನು ಕಲಿಯುವ ಅವಕಾಶ ದೊರೆಯುತ್ತಿದೆ ಎಂದು ತಿಳಿಸಿದರು.

ಸ್ವಚ್ಛತೆಯ ಅಗತ್ಯದ ಬಗ್ಗೆ ಪ್ರಸ್ತಾಪಿಸುತ್ತಾ, ಉತ್ತರ ಪ್ರದೇಶದ ಆಕಾಶ್ ಮತ್ತು ರೋಹನ್ ಅವರು ನದಿಯ ಘಟ್ಟಗಳು ಸೇರಿದಂತೆ ಸಾರ್ವಜನಿಕ ಸ್ಥಳಗಳನ್ನು ಸ್ವಚ್ಛಗೊಳಿಸಲು ಇತರರಿಗೆ ಪ್ರೇರಣೆ ನೀಡಿರುವುದನ್ನು ಪ್ರಧಾನಿ ಉಲ್ಲೇಖಿಸಿದರು. ಒಂದು ಸ್ಥಳವನ್ನು ಸ್ವಚ್ಛವಾಗಿಡುವ ಸಂಕಲ್ಪವು ಜನರ ಸ್ವಯಂ ಬದ್ಧತೆಯಾದಾಗ, ಆ ಸ್ಥಳದ ಸಂಪೂರ್ಣ ಗುರುತೇ ಬದಲಾಗುತ್ತದೆ ಎಂದರು.

ಅಮರನಾಥ ಯಾತ್ರೆಯ ಸಂದರ್ಭದಲ್ಲಿ ೪೦೦ ಮೆಟ್ರಿಕ್ ಟನ್‌ಗೂ ಅಧಿಕ ತ್ಯಾಜ್ಯವನ್ನು ಸಂಗ್ರಹಿಸಿ ಸಂಸ್ಕರಿಸಲಾಗಿದೆ ಎಂದು ತಿಳಿಸಿದ ಅವರು, ಒಡಿಶಾದ ದೇಬ್ರಿಗಢ ಪ್ರದೇಶದ ಧೋದ್ರೋಕಸುಮ್‌ನ ಮೈಥಿಲಿ ಭೂಯೆ ಅವರು ಪ್ರಕೃತಿಯ ಸಂರಕ್ಷಣೆಯೊಂದಿಗೆ ಜೀವನದಲ್ಲಿ ಸಮೃದ್ಧಿ ಸಾಧಿಸಲು ಸಾಧ್ಯ ಎಂಬುದನ್ನು ತೋರಿಸಿಕೊಟ್ಟಿದ್ದಾರೆ ಎಂದು ಹೇಳಿದರು.

ಮುಂಬೈನ ಕೃಷ್ಣ ಶೇಷಾದ್ರಿ ಅವರು ರೂಪಿಸಿರುವ 'ಭಾರತರಾಜ್ಯ ಡಾಟ್ ಕಾಮ್' ಎಂಬ ವಿಶಿಷ್ಟ ಜಾಲತಾಣ ಬಗ್ಗೆಯೂ ಮಾತನಾಡಿದ ಅವರು, ಈ ಜಾಲತಾಣದಲ್ಲಿ ಯಾವುದೇ ವರ್ಷವನ್ನು ಆಯ್ಕೆ ಮಾಡಿದರೆ, ಆ ಕಾಲದಲ್ಲಿ ಭಾರತದ ಯಾವ ಭಾಗದಲ್ಲಿ ಯಾರ ಆಳ್ವಿಕೆ ಇತ್ತು ಎಂಬ ಮಾಹಿತಿಯನ್ನು ಸುಲಭವಾಗಿ ತಿಳಿಯಬಹುದಾಗಿದೆ. ಇತಿಹಾಸ ವಿದ್ಯಾರ್ಥಿಗಳು ಮಾತ್ರವಲ್ಲದೆ, ಇತರರೂ ಕೂಡ ಭಾರತದ ಗತಕಾಲದ ಮಾಹಿತಿ ಪಡೆಯಬಹುದು ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ರಾಷ್ಟ್ರೀಯ ಕೈಮಗ್ಗ ದಿನ, ಭಾರತ ಬಿಟ್ಟು ತೊಲಗಿ ಚಳವಳಿಯ ಸ್ಮರಣೆ, ವಿಭಜನೆಯ ಭೀಕರತೆ ಸ್ಮೃತಿ ದಿನ ಮೊದಲಾದವು ಸೇರಿದಂತೆ ಈ ತಿಂಗಳಲ್ಲಿ ದೇಶಭಕ್ತಿಯು ವೈವಿಧ್ಯಮಯವಾಗಿ ಅಭಿವ್ಯಕ್ತಗೊಂಡಿದೆ. 'ಹರ್ ಘರ್ ತಿರಂಗಾ' ಅಭಿಯಾನವು ಈ ಭಾವಕ್ಕೆ ಮತ್ತಷ್ಟು ಚೈತನ್ಯ ತುಂಬಿದೆ.

ಕೃಷ್ಣ ಜನ್ಮಾಷ್ಟಮಿ, ವಿಶ್ವಕರ್ಮ ಜಯಂತಿ ಸೇರಿದಂತೆ ಮುಂದಿನ ತಿಂಗಳ ಎಲ್ಲಾ ಹಬ್ಬ, ಉತ್ಸವಗಳಿಗೆ ಇದೇ ವೇಳೆ ಪ್ರಧಾನಮಂತ್ರಿ ಶುಭ ಹಾರೈಸಿದ್ದಾರೆ.

---

ಕರ್ನಾಟಕದಲ್ಲಿ ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಗೃಹಲಕ್ಷ್ಮೀ ಯೋಜನೆ ಆರಂಭವಾಗಿ ಇಂದಿಗೆ ಮೂರು ವರ್ಷಗಳಾಗಿದ್ದು, ಹೆಣ್ಣು ಮಕ್ಕಳಲ್ಲಿ ಸಬಲೀಕರಣದ ಭರವಸೆ ತುಂಬಿದೆ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೇಳಿದ್ದಾರೆ.

ಗೃಹಲಕ್ಷ್ಮೀ ಎಂದರೆ ಕೇವಲ ೨ ಸಾವಿರ ರೂಪಾಯಿ ಅಲ್ಲ. ಅದು ಒಬ್ಬ ತಾಯಿಯ ಕಣ್ಣಲ್ಲಿ ನೆಮ್ಮದಿಯಾಗಿ, ಮಹಿಳೆಯರಿಗೆ ಆತ್ಮಗೌರವವಾಗಿ, ಮಕ್ಕಳ ಭವಿಷ್ಯಕ್ಕೆ ಬೆಳಕಾಗಿ ವಿವಿಧ ರೀತಿಯಲ್ಲಿ ಸ್ವಾವಲಂಬನೆಗೆ ಪೂರಕವಾಗಿದೆ. ಮೂರು ವರ್ಷಗಳ ಗೃಹಲಕ್ಷ್ಮೀ ಯೋಜನೆಯ ಯಶಸ್ವಿ ಪಯಣವು, ಲಕ್ಷಾಂತರ ಮಹಿಳೆಯರ ಬದುಕಿನಲ್ಲಿ ಹೊಸ ಭರವಸೆ ಮೂಡಿಸಿದೆ ಎಂದು ಅವರು ಸಾಮಾಜಿಕ ಮಾಧ್ಯಮ ಸಂದೇಶದಲ್ಲಿ ತಿಳಿಸಿದ್ದಾರೆ.

ರಾಜ್ಯ ಸರ್ಕಾರವು ಮೂರು ವರ್ಷಗಳ ಹಿಂದೆ ಈ ದಿನದಂದು ಮಹತ್ವಾಕಾಂಕ್ಷಿ ಗೃಹಲಕ್ಷ್ಮೀ ಯೋಜನೆಯನ್ನು ಜಾರಿಗೆ ತಂದಿದ್ದು, ಇಂದು ಲಕ್ಷಾಂತರ ಮಹಿಳೆಯರ ದೈನಂದಿನ ವೆಚ್ಚಗಳಿಗೆ ನೆರವಾಗಿ, ಅವರಲ್ಲಿ ಆಶಾಕಿರಣ ಮೂಡಿಸಿದೆ ಎಂದು ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಎಕ್ಸ್‌ನಲ್ಲಿ ತಿಳಿಸಿದ್ದಾರೆ.

---

ವಿಶ್ವಾಸಾರ್ಹತೆಯೇ ಪತ್ರಿಕೋದ್ಯಮದ ಪ್ರಮುಖ ನೈತಿಕ ಮೌಲ್ಯ ಎಂದು ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಹೇಳಿದ್ದಾರೆ.

ಕೇರಳದ ಆಲಪ್ಪುಳದಲ್ಲಿ ಕೇರಳ ಕೌಮುದಿ ಪತ್ರಿಕೆಯ ೧೧೫ನೇ ವಾರ್ಷಿಕೋತ್ಸವ ಸಮಾರಂಭ ಉದ್ಘಾಟಿಸಿ ಮಾತನಾಡಿದ ಅವರು, ಒಂದು ಶತಮಾನಕ್ಕೂ ಹೆಚ್ಚು ಕಾಲ ಪತ್ರಿಕೋದ್ಯಮ ಕ್ಷೇತ್ರದಲ್ಲಿ ನೈತಿಕ ಮೌಲ್ಯಗಳನ್ನು ತ್ಯಜಿಸದೆ ಸೇವೆ ಸಲ್ಲಿಸುತ್ತಿರುವ ಪತ್ರಿಕೆಯನ್ನು ಉಪರಾಷ್ಟ್ರಪತಿ ಅಭಿನಂದಿಸಿದರು.

ಈ ಕಾರ್ಯಕ್ರಮದಲ್ಲಿ ರಾಜ್ಯಪಾಲ ರಾಜೇಂದ್ರ ವಿಶ್ವನಾಥ್ ಅರ್ಲೇಕರ್, ಸಚಿವ ರೋಜಿ ಎಂ. ಜಾನ್ ಸೇರಿದಂತೆ ಗಣ್ಯರು ಉಪಸ್ಥಿತರಿದ್ದರು.

---

ಪ್ರಧಾನಮಂತ್ರಿ ಮುದ್ರಾ ಯೋಜನೆಯಡಿ ಅತ್ಯಂತ ಕಡಿಮೆ ಬಡ್ಡಿದರದಲ್ಲಿ ಸಾಲ ಸಿಗಲಿದೆ ಎಂದು ಸಾಮಾಜಿಕ ಜಾಲತಾಣದಲ್ಲಿ ಹರಿದಾಡುತ್ತಿರುವ ಮಾಹಿತಿಯಲ್ಲಿ ಸತ್ಯಾಂಶವಿಲ್ಲ ಎಂದು ಕೇಂದ್ರ ಸರ್ಕಾರ ತಿಳಿಸಿದೆ.

ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿರುವ ಸಾಲ ಮಂಜೂರಾತಿ ಪತ್ರವು ನಕಲಿ ಎಂದು ವಾರ್ತಾ ಶಾಖೆ - ಪಿಐಬಿಯ ಸತ್ಯಶೋಧನಾ ಘಟಕ ತಿಳಿಸಿದೆ.

ಪ್ರಧಾನಮಂತ್ರಿ ಮುದ್ರಾ ಯೋಜನೆಯಡಿ ಸಾಲ ಪಡೆಯಲು ಸಮೀಪದ ಬ್ಯಾಂಕ್ ಶಾಖೆಗಳು, ಭಾರತೀಯ ರಿಸರ್ವ್ ಬ್ಯಾಂಕ್‌ನಲ್ಲಿ ನೋಂದಾಯಿತ ಬ್ಯಾಂಕೇತರ ಹಣಕಾಸು ಸಂಸ್ಥೆಗಳು, ಸೂಕ್ಷ್ಮ ಹಣಕಾಸು ಸಂಸ್ಥೆಗಳು ಸೇರಿದಂತೆ ಅಧಿಕೃತ ಹಣಕಾಸು ಸಂಸ್ಥೆಗಳನ್ನು ಸಂಪರ್ಕಿಸಬಹುದು ಎಂದು ಪಿಐಬಿ ತಿಳಿಸಿದೆ.

---

ದುಬೈನಲ್ಲಿ ಇಂದು ನಡೆಯಲಿರುವ ಟಿ-೨೦ ಏಷ್ಯಾ ಕಪ್ ಕ್ರಿಕೆಟ್ ಪಂದ್ಯದಲ್ಲಿ ಭಾರತದ ವನಿತೆಯರ ತಂಡ ಥಾಯ್ಲೆಂಡ್ ತಂಡವನ್ನು ಎದುರಿಸಲಿದೆ. ಪಂದ್ಯ ಭಾರತೀಯ ಕಾಲಮಾನ ರಾತ್ರಿ ೮.೩೦ಕ್ಕೆ ಆರಂಭವಾಗಲಿದೆ.

ದುಬೈನ ಅಂತಾರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣದಲ್ಲಿ ಮಹಿಳಾ ಏಷ್ಯಾ ಟಿ-೨೦ ಪಂದ್ಯಾವಳಿ ಶುಕ್ರವಾರ ಆರಂಭವಾಗಿದೆ. ಒಟ್ಟು ಎಂಟು ತಂಡಗಳು ಏಷ್ಯಾ ಕಪ್‌ನಲ್ಲಿ ಸ್ಪರ್ಧಿಸುತ್ತಿದ್ದು, ಎರಡು ಗುಂಪುಗಳಾಗಿ ವಿಂಗಡಿಸಲಾಗಿದೆ. ಭಾರತ ತಂಡವು ಪಾಕಿಸ್ತಾನ, ಥಾಯ್ಲೆಂಡ್ ಮತ್ತು ಹಾಂಗ್ ಕಾಂಗ್ ಜೊತೆಗೆ ಗ್ರೂಪ್ ಎ ನಲ್ಲಿ ಸ್ಥಾನ ಪಡೆದಿದ್ದರೆ, ಬಾಂಗ್ಲಾದೇಶ, ಇಂಡೋನೇಷ್ಯಾ, ಶ್ರೀಲಂಕಾ ಮತ್ತು ಯುಎಇ ತಂಡಗಳು ಗ್ರೂಪ್ ಬಿ ನಲ್ಲಿ ಆಡಲಿವೆ. ಅಗ್ರ ಎರಡು ತಂಡಗಳು ಸೆಮಿಫೈನಲ್‌ಗೆ ಅರ್ಹತೆ ಪಡೆಯಲಿವೆ.

ಸೆಪ್ಟೆಂಬರ್ ೫ ರಂದು ಭಾರತ - ಪಾಕಿಸ್ತಾನ ನಡುವೆ ಪಂದ್ಯ ನಡೆಯಲಿದೆ.

---

ಬೆಲ್ಜಿಯಂನಲ್ಲಿ ಇಂದು ನಡೆಯಲಿರುವ ಎಫ್‌ಐಎಚ್ ಪುರುಷರ ಹಾಕಿ ವಿಶ್ವಕಪ್ ಫೈನಲ್ ಪಂದ್ಯದಲ್ಲಿ ಹಾಲಿ ಚಾಂಪಿಯನ್ ಜರ್ಮನಿ ಮತ್ತು ಸ್ಪೇನ್ ಸೆಣಸಲಿವೆ. ಪಂದ್ಯ ಭಾರತೀಯ ಕಾಲಮಾನ ರಾತ್ರಿ ೮ ಗಂಟೆಗೆ ಆರಂಭವಾಗಲಿದೆ.